# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:– 07–11–2020 ರಂದು ಬೆಳಗ್ಗೆ:– 11.30 ಗಂಟೆಗೆ ಪಾಲಿಕೆಸೌಧ ವಾರ್ಡ್ ಸಂಖ್ಯೆ 128 ನಾಗರಭಾವಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020–21/21–09–2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ನಾಗರಾಜ್ ಸಿಂಗ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೋವಿಂದರಾಜನಗರ ಉಪವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:–**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ<br>ಶ್ರೀ. ನಾಗರಾಜ್ ಸಿಂಗ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು,<br>ಗೋವಿಂದರಾಜನಗರ ಉಪವಿಭಾಗ, ಬಿ.ಬಿ.ಎಂ.ಪಿ, | 9945138444 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ಮಂಜೇಗೌಡ್ರು, ಸಹಾಯಕ ಅಭಿಯಂತರರು, ವಾರ್ಡ್ ನಂ.128 | 7019520049 |
| 3 | ಶ್ರೀ. ಅಲೋಕ್ ಶೆಟ್ಟಿ, ಸಹಾಯಕ ಕಾರ್ಯಪಾಲಕ ಅಭಿಯಂತರರು,<br>ಚಂದ್ರಾಬಡಾವಣೆ ಉಪವಿಭಾಗ, ಬಿ.ಬಿ.ಎಂ.ಪಿ, | 9632244060 |
| 4 | ಶ್ರೀ. ನಾಗೇಂದ್ರ Sub Inspector, ChandraLayout. | – |
| 5 | ಶ್ರೀ. ಕೃಷ್ಣಪ್ಪ, AE, BWSSB, ChandraLayout. | 8660271833 |
| 6 | ಶ್ರೀ. ವೆಂಕಟೇಶ್, AE, BESCOM, ChandraLayout. | – |
| 7 | ಶ್ರೀ. ಸಿದ್ದೇಶ್, Health Inspector, ChandraLayout. | 9480685593 |
| 8 | ಶ್ರೀಮತಿ. ಶಾರದಮ್ಮ, Revenue Inspector, ChandraLayout. | 8861794172 |
| 9 | ಶ್ರೀ. ನರಸಿಂಹ ಮೂರ್ತಿ, ಕಂದಾಯ ವಸೂಲಿಗಾರರು, ಚಂದ್ರಾಬಡಾವಣೆ. | 9845762122 |
| 10 | ಶ್ರೀ. ವಿಜಯ್ ಕುಮಾರ್, ಕಿರಿಯ ಆರೋಗ್ಯ ಪರಿವೀಕ್ಷಕರು,<br>ಚಂದ್ರಾಬಡಾವಣೆ. | 9738630005 |
| 11 | ಶ್ರೀ. ರಮೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು, ಚಂದ್ರಾಬಡಾವಣೆ. | 9206687122 |

*****

ದಿನಾಂಕ: 07–11–2020ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ

Scanned with CamScanner

ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತಾರೆ, ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1. **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಅಧ್ಯಕ್ಷರು ಮಾತನಾಡಿ, ಘನತ್ಯಾಜ್ಯ ನಿರ್ವಹಣೆಗೆ ಸಂಬಂದಿಸಿದಂತೆ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಎಸೆದರೆ ಫೈನ್ ಹಾಕುವುದು ಹಾಗೂ ಕಸ ಹಾಕದಂತೆ ಜಾಗೃತಿ ಮೂಡಿಸುವುದರ ಬಗ್ಗೆ ಮತ್ತು ನಾಗರಭಾವಿ ಮುಖ್ಯರಸ್ತೆ ಬಳಿ ಸಿಲ್ಟ್ ತುಂಬಿರುವುದನ್ನು ತೆಗೆಸಲು ತಿಳಿಸಿದರು,

ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿ ರವರೊಂದಿಗೆ ಚರ್ಚಿಸಿ ಕೂಡಲೇ ಮಾನಸನಗರ, ಗಾರ್ಡನ್ ವಿಲಾಸ್ ಬಳಿ ಸಿಲ್ಟ್‌ನ್ನು ತೆಗೆಯಲು ಹಾಗೂ ಘನತ್ಯಾಜ್ಯ ವಿಲೇವಾರಿ ನಿರ್ವಹಣೆಯ ಬಗ್ಗೆ ಹೇಳಿದರು ಮತ್ತು ಸ್ಲಂ ಗಳಲ್ಲಿ ಕಸದ ಗಾಡಿಯ ಜೊತೆ ಮಾರ್ಷಲ್‌ಗಳು ಹೋಗಿ ಜಗಳವಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

2. **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಬಗ್ಗೆ.**

ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಭಿಯಂತರರೊಂದಿಗೆ ಮಾತನಾಡಿ ನಾಗರಭಾವಿ ಮುಖ್ಯರಸ್ತೆ, ಸರ್ವಿಸ್ ರಸ್ತೆಯ ಬಳಿ ಸ್ಯಾನಿಟರಿ ಪೈಪ್ ಒಡೆದು ಹೋಗಿದ್ದು, ಅದನ್ನು ಕೂಡಲೇ ಸರಿಪಡಿಸಲು ಸೂಚಿಸಿರುತ್ತಾರೆ. ಮತ್ತು ಚೇಂಬರ್ಸ್ ಅಗಿಯುವ ಮುನ್ನ ಬಿ.ಬಿ.ಎಂ.ಪಿ ವತಿಯಿಂದ ಅನುಮತಿ ಪಡೆದು ರಸ್ತೆ ಅಗೆಯುವಂತೆ ತಿಳಿಸಿದರು.

3. **ಬೆಸ್ಕಾಂ ಇಲಾಖೆ ಬಗ್ಗೆ.**

ಬೆಸ್ಕಾಂ ಇಲಾಖೆಯ ಅಭಿಯಂತರರೊಂದಿಗೆ ಮಾತನಾಡಿ ನಾಗರಭಾವಿ ವಿಲ್ಲೇಜ್, ಟೀಚರ್ಸ್ ಲೇಔಟ್, ಮಾನಸನಗರ, ನಾಗರಭಾವಿ ಮುಖ್ಯರಸ್ತೆ, ಚಾಲುಕ್ಯನಗರ, ಕೊಕೋನಟ್ ಗಾರ್ಡನ್‌ಗಳಲ್ಲಿ ಕೇಬಲ್ ಹಾಕಿ ಗುಂಡಿಗಳನ್ನು ಮಾಡಿದ್ದು, ಇದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿ ಇದನ್ನು ಕೂಡಲೇ ಸರಿಸಪಡಿಸುವ ಬಗ್ಗೆ ಹೇಳಿದರು ಮತ್ತು ಆ ರಂಬೆ ಕೊಂಬೆಗಳನ್ನು ತೆರವುಗೊಳಿಸಲು ಕ್ರಮ ವಹಿಸಲು ಸೂಚಿಸಿದರು.

4. **ಆರೋಗ್ಯ ಇಲಾಖೆ ಬಗ್ಗೆ.**

ಆರೋಗ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿ ಚಂದ್ರಾಬಡಾವಣೆ ವ್ಯಾಪ್ತಿಯಲ್ಲಿ ಇಲ್ಲಿಯವರೆಗೆ 722 ಕೋವಿಡ್-19 ಪಾಸಿಟೀವ್ ಕೇಸ್‌ಗಳು ಬಂದಿದ್ದು ಇದರಲ್ಲಿ 380 ರಿಕವರಿ, 14 ಸಾವು, 328 ಆಕ್ಟೀವ್ ಕೇಸ್ ಗಳಿರುವುದರ ಬಗ್ಗೆ ಚರ್ಚಿಸಿ, ಇದರ ಬಗ್ಗೆ ಪ್ರೈಮರಿ ಕಾಂಟಾಕ್ಟ್ ಹಾಗೂ ಸೆಕಂಡರಿ ಕಾಂಟಾಕ್ಟ್ ಸರ್ವೆಯನ್ನು ಮಾಡಿ ಹಾಗೂ ಮಾಸ್ಕ್, ಸ್ಯಾನಿಟೀಸರ್ ಕಡ್ಡಾಯವಾಗಿ ಬಳಸಿ ಎಂದು ಸೂಚಿಸಿದರು.

ಕೋವಿಡ್- 19 ಸಾಂಕ್ರಮಿಕ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ ಆರುಂಧತಿನಗರ ಸ್ಲಂಗಳಲ್ಲಿ ಆರೋಗ್ಯ ಇಲಾಖೆ ವತಿಯಿಂದ ಔಷಧಿ ಸಿಂಪಡಣೆ ಕಾರ್ಯವನ್ನು ಕೈಗೊಳ್ಳಲಾಗಿರುತ್ತದೆ.

Scanned with CamScanner

5. ಕಂದಾಯ ಇಲಾಖೆ ಬಗ್ಗೆ.

ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿ ಚಂದ್ರಾಬಡಾವಣೆ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚುತ್ತಿರುವುದರಿಂದ ಟ್ಯಾಕ್ಸ್ ಕಡಿಮೆ ಯಾಗುತ್ತಿರುವ ಬಗ್ಗೆ ಚರ್ಚಿಸಿದರು, ಹಾಗೂ ಎಲ್ಲರಿಗು ಬ್ಯಾಂಕ್‌ಗೆ ಹೋಗುವ ಬದಲು ಆನ್‌ಲೈನ್ ಪೇಮೆಂಟ್ ಮಾಡಿ ಕೋವಿಡ್-19 ನಿಂದ ರಕ್ಷಿಸಿಕೊಳ್ಳಲು ತಿಳಿಸಿದರು.

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೋಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.128 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

K. Manu

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 128

ಅಧ್ಯಕ್ಷರು,
ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು
ಗೋವಿಂದರಾಜನಗರ ಉಪವಿಭಾಗ
ವಾರ್ಡ್ ಸಂಖ್ಯೆ 128, ನಾಗರಭಾವಿ

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.

Scanned with CamScanner